ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ವಾಹನ ಚಾಲನಾ ಪರವಾನಗಿಯಲ್ಲಿ ದಲ್ಲಾಳಿಗಳನ್ನು ತಡೆಗಟ್ಟುವ ಬಗ್ಗೆ

ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ (ವಿಧಾನಸಭೆಯಿಂದ ಚುನಾಯಿತರಾದವರು) -

64 (676) ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇತ್ತೀಚೆಗೆ ರಾಜ್ಯದಲ್ಲಿ ಹೆಚ್ಚುತ್ತಿರುವ ವಾಹನ ಅಪಘಾತಗಳಲ್ಲಿ ಶೇಕಡ 89 ಪ್ರತಿಶತ ಅಪಘಾತಗಳಲ್ಲಿ ನಿರ್ಲಕ್ಷ್ಯ, ಬೇಜವಾಬ್ದಾರಿ ಮತ್ತು ಸರಿಯಾದ ತರಬೇತಿಯಿಲ್ಲದ ವಾಹನ ಚಾಲಕರಿಂದ ಘಟಿಸುತ್ತಿದೆ ಎಂಬುದಾಗಿ ಸಮೀಕ್ಷಾ ವರದಿಯಿಂದ ತಿಳಿದುಬಂದಿರುವ ಹಿನ್ನೆಲೆಯಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; ಇಂತಹ ಅಪಘಾತಗಳನ್ನು ತಡೆಯಲು ಪರಿಣಾಮಕಾರಿಯಾದ ನಿಯಮಗಳನ್ನು ರೂಪಿಸಲಾಗಿದೆಯೇ;

(ಆ) ಸಮರ್ಪಕವಾದ ತರಬೇತಿ ಹೊಂದದ ವಾಹನ ಚಾಲಕರಿಗೆ ಚಾಲನಾ ಪರವಾನಗಿ ನೀಡುವ ಸಂದರ್ಭದಲ್ಲಿ ಅಧಿಕಾರಿಗಳು ಈ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಲು ಕೈಗೊಂಡಿರುವ ಕ್ರಮಗಳೇನು;

(ಇ) ವಾಹನ ಚಾಲನಾ ಪರವಾನಗಿಗಳನ್ನು ದಲ್ಲಾಳಿಗಳ ಮೂಲಕ ನೀಡಲಾಗುತ್ತಿರುವುದರಿಂದ ತರಬೇತಿಯಿಲ್ಲದ ವಾಹನ ಚಾಲಕರು ಪರವಾನಗಿ ಪಡೆಯಲಾಗುತ್ತಿರುವುದರಿಂದ ಈ ಕುರಿತಾಗಿ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ?